

ಅರುಣ ಪಿ. ಭಟ್ಟ


## ವಾರಭವಿಷ್ಯ: 21.09.2023ದಿಂದ 27.09.2023ರವರೆಗೆ




ವಾರದ ಆರಂಭದಲ್ಲಿ ಉನ್ನತ ಶಿಕ್ಷಣಕ್ಕೆ ಯತ್ನಿಸುತ್ತಿರುವವರಿಗೆ ಯಶಸ್ಸು. ಈ ಅವಧಿಯಲ್ಲಿ ದೇವತಾ ಆರಾಧನೆಗೆ ಹೆಚ್ಚಿನ ಒತ್ತು ಕೊಡುವಿರಿ. ವೃತ್ತಿಪರ ಜೀವನದಲ್ಲಿ ಅತ್ಯುತ್ತಮವಾದ ಬೆಳವಣಿಗೆ ಇದೆ. ಆರೋಗ್ಯದಲ್ಲಿ ಚೇತರಿಕೆ ಕಾಣಿಸಿಕೊಳ್ಳುತ್ತದೆ. ವಾರದ ಅಂತ್ಯಕ್ಕೆ ಸರಿಯುತ್ತಾ ವೈಯಕ್ತಿಕ ಸಂಬಂಧದಲ್ಲಿ ವಿಶ್ವಾಸ ಹೆಚ್ಚಾಗಲಿದೆ. ಆದಾಯ ಅನುಕೂಲಕರ. ಶುಭದಿನ 23. ಕನಕಧಾರಾ ಸ್ತೋತ್ರ ಪಠಣಮಾಡಿ.




ಆಸ್ತಿ ಖರೀದಿಗೆ ಪ್ರಯತ್ನಿಸುತ್ತೀರಿ. ಪ್ರಮಾದಗಳನ್ನು ತಡೆಯುವಂತಹ ಸನ್ನಿವೇಶಗಳು ನಿಮಗೆ ಪೂರಕ ಆಗಲಿವೆ. ವೈಯಕ್ತಿಕ ಸಂಬಂಧದಲ್ಲಿ ಕೆಲವು ಕಹಿ ಬೆಳವಣಿಗೆಗಳು ಆಗಲಿವೆ. ವಾರದ ಅಂತ್ಯಕ್ಕೆ ಸರಿಯುತ್ತಾ ಕುಟುಂಬದವರ ಬೆಂಬಲ ದೊರೆಯಲಿದೆ. ಉನ್ನತ ಶಿಕ್ಷಣ ಪಡೆಯಬೇಕು ಎಂದುಕೊಂಡವರಿಗೆ ಪ್ರಗತಿ ಇದೆ. ಆರೋಗ್ಯ ಸಮಸ್ಯೆಗಳು ಕಾಡುತ್ತಿದ್ದಲ್ಲಿ ಸುಧಾರಣೆ ಆಗಲಿದೆ. ಶುಭದಿನ 25. ಸೌಂದರ್ಯಲಹರಿ ಪಠಿಸಿ.





ವಾರದ ಶುರುವಿನಲ್ಲೇ ವ್ಯಾಪಾರ ಉದ್ಯಮದಲ್ಲಿ ಪ್ರಗತಿ ಕಾಣುತ್ತದೆ. ಇದರಿಂದ ಆತ್ಮವಿಶ್ವಾಸ ಹೆಚ್ಚಾಗುತ್ತದೆ. ಪ್ರತಿಷ್ಠಿತ ಸಂಸ್ಥೆಯೊಂದರ ಜತೆಗೆ ಮಹತ್ವದ ಒಪ್ಪಂದವೊಂದಕ್ಕೆ ಸಹಿ ಹಾಕುವ ಸಾಧ್ಯತೆಗಳಿವೆ. ವ್ಯಾಪಾರ ಉದ್ಯಮ ವಿಸ್ತರಣೆ ಬಗ್ಗೆ ಮುಖ್ಯವಾದ ತೀರ್ಮಾನವನ್ನು ಕೈಗೊಳ್ಳಲಿದ್ದೀರಿ. ವೈವಾಹಿಕ ಜೀವನ ಸಂತೋಷದಾಯಕವಾಗಿ ಇರುತ್ತದೆ. ಶುಭದಿನ 24. ಕಾಲಭೈರವನ ಸೇವೆ ಮಾಡಿ.





ವಾರದ ಶುರುವಿನಲ್ಲಿ ಕುಟುಂಬ ಸದಸ್ಯರ ಜೊತೆಗೆ ಕೆಲ ಅಸಮಾಧಾನದ ಘಟನೆಗಳು ಸಂಭವಿಸುವ ಸಾಧ್ಯತೆ ಇದೆ. ಆಪ್ತರಾದ ಸಂಬಂಧಿಕರನ್ನು ಭೇಟಿ ಆಗಲಿದ್ದೀರಿ. ಕೌಟುಂಬಿಕವಾಗಿ ಕೆಲ ಜವಾಬ್ದಾರಿಗಳನ್ನು ನೀವು ವಹಿಸಿಕೊಳ್ಳಬೇಕಾಗುತ್ತದೆ. ಕೋರ್ಟ್ ವ್ಯಾಜ್ಯಗಳು ಇದ್ದಲ್ಲಿ ನಿಮ್ಮ ಪರ ಆಗುವ ಸಾಧ್ಯತೆಗಳು ಹೆಚ್ಚಿವೆ. ಧಾರ್ಮಿಕ ಕೆಲಸ ಕಾರ್ಯಗಳು ಅಂದುಕೊಂಡ ವೇಗದಲ್ಲಿ ಸಾಗುವುದಿಲ್ಲ. ಶುಭದಿನ 22. ಲಿಂಗಾಷ್ಟಕ ಪಠಿಸಿರಿ.




ಆದಾಯ ಮೂಲ ಹೆಚ್ಚಿಸಿಕೊಳ್ಳುವ ಕಡೆಗೆ ಗಮನ ಕೇಂದ್ರೀಕೃತವಾಗಿರುತ್ತದೆ. ಆದಾಯದಲ್ಲಿ ಏರಿಕೆ ಕಾಣಿಸಿಕೊಳ್ಳುತ್ತದೆ. ಶೈಕ್ಷಣಿಕ ಕ್ಷೇತ್ರದಲ್ಲಿ ಉತ್ತಮವಾದ ಪ್ರಗತಿ ಇದೆ. ವಾರದ ಮಧ್ಯ ಭಾಗದಲ್ಲಿ ಆರೋಗ್ಯದಲ್ಲಿ ಸಮಸ್ಯೆಗಳು ಕಾಣಿಸಿಕೊಳ್ಳಬಹುದು. ದಿಢೀರನೆ ಸಂಗಾತಿ ಜತೆಗೆ ಕಲಹ ಕಾಣಿಸಿಕೊಳ್ಳಬಹುದು. ವಾರದ ಅಂತ್ಯಕ್ಕೆ ಆರೋಗ್ಯ ಚೇತರಿಸಿಕೊಳ್ಳುತ್ತದೆ. ಶುಭದಿನ 20. ಲಕ್ಷ್ಮೀ ನಾರಾಯಣ ಹೃದಯ ಪಾರಾಯಣ ಮಾಡಿ.





ಉದ್ಯೋಗಸ್ಥರಿಗೆ ವಾರದ ಶುರುವಿನಲ್ಲಿ ಯಶಸ್ಸು ದೊರೆಯಲಿದೆ. ಈ ಹಿಂದೆ ನೀವು ಹಾಕಿದ ಶ್ರಮಕ್ಕೆ ಒಂದೊಂದಾಗಿ ಯಶಸ್ಸು ದೊರೆಯಲು ಆರಂಭವಾಗುತ್ತದೆ. ವಾರದ ಮಧ್ಯ ಭಾಗದಲ್ಲಿ ವರ್ಚಸ್ಸು ಹೆಚ್ಚಾಗುತ್ತದೆ. ಶುಭ ಸುದ್ದಿಯನ್ನು ಕೇಳುವ ಯೋಗ ಇದೆ. ಇದರಿಂದ ಮನೆಯಲ್ಲಿ ಸಂತಸದ ವಾತಾವರಣ ಇರುತ್ತದೆ. ಆದರೆ ನಿಮ್ಮ ಖರ್ಚು ವೆಚ್ಚಗಳು ಅಧಿಕವಾಗಲಿವೆ. ಶುಭದಿನ 24. ಗಣಪತಿಗೆ ದೂರ್ವಾರ್ಚನೆ ಮಾಡಿರಿ.





ಪ್ರತಿಭೆ ಪ್ರದರ್ಶನಕ್ಕೆ ಅವಕಾಶಗಳು ದೊರೆಯಲಿವೆ. ಬಹುಮಾನ ದೊರೆಯಬಹುದು. ಉನ್ನತ ಶಿಕ್ಷಣದಲ್ಲಿ ಪ್ರಗತಿ ಇದೆ. ಉದ್ಯೋಗಸ್ಥರಿಗೆ ಅತ್ಯುತ್ತಮವಾದ ಸಮಯ. ಬಹಳ ಕಾಲದಿಂದ ಹಾಕಿಕೊಂಡಿದ್ದ ಯೋಜನೆಗಳನ್ನು ಜಾರಿಗೆ ತರಲಿದ್ದೀರಿ. ಮೇಲಧಿಕಾರಿಗಳ ಜೊತೆಗೆ ಉತ್ತಮ ಸಂಪರ್ಕ ಸಾಧಿಸುತ್ತೀರಿ. ನಿಮ್ಮ ಪ್ರತಿಭೆ ಹಾಗೂ ಶ್ರಮಕ್ಕೆ ಅವರು ಮೆಚ್ಚುಗೆ ಸೂಚಿಸುತ್ತಾರೆ. ಶುಭದಿನ 26. ವಿಷ್ಣು ಸಹಸ್ರನಾಮ ಪಠಿಸಿ.





ವಾರದ ಶುರುವಿನಲ್ಲಿ ಕೌಟುಂಬಿಕ ಸಂಗತಿಗಳಲ್ಲಿ ಹಿನ್ನಡೆ ಕಾಣುವಂತಾಗುತ್ತದೆ. ಹಲವು ಸವಾಲುಗಳು ಏಕಕಾಲಕ್ಕೆ ಎದುರಾಗುತ್ತವೆ. ಹೆಚ್ಚಿನ ಹಣ ಕೂಡ ಖರ್ಚಾಗಲಿದೆ. ಆರೋಗ್ಯ ಸಮಸ್ಯೆಗಳು ಎದುರಾಗಬಹುದು. ಆರೋಗ್ಯದ ಬಗ್ಗೆ ಹೆಚ್ಚಿನ ಕಾಳಜಿ ತೆಗೆದುಕೊಳ್ಳಬೇಕಾಗುತ್ತದೆ. ನಿಮ್ಮ ಅವಕಾಶಗಳ ಕಡೆಗೆ ಗಮನ ಕೇಂದ್ರೀಕರಿಸಲಿದ್ದೀರಿ. ಶುಭದಿನ 25. ದೈವ್ಯಪರಾದ ಕ್ಷಮಾಪನಾ ಸ್ತೋತ್ರ ಪಠಿಸಿ.





ವಾರದ ಆರಂಭದಲ್ಲಿ ಗೃಹಾಲಂಕಾರದ ಕಡೆಗೆ ನಿಮ್ಮ ಗಮನ ಹೆಚ್ಚಿರುತ್ತದೆ. ಆರೋಗ್ಯದಲ್ಲಿ ವ್ಯತ್ಯಾಸ ಆಗುವುದರಿಂದ ಅದಕ್ಕೆ ಸೂಕ್ತ ಚಿಕಿತ್ಸೆ ಪಡೆಯಬೇಕಾಗುತ್ತದೆ. ವಾರದ ಅಂತ್ಯಕ್ಕೆ ಸರಿಯುತ್ತಾ ಶೈಕ್ಷಣಿಕ ಸಂಗತಿಗಳಿಗೆ ಹೆಚ್ಚಿನ ಮಹತ್ವ ನೀಡುತ್ತೀರಿ. ಆದಾಯ ಹೆಚ್ಚಳ ಮಾಡಿಕೊಳ್ಳುವುದಕ್ಕೆ ಹಲವು ಅವಕಾಶಗಳು ದೊರೆಯಲಿವೆ. ಶುಭದಿನ 26. ಆಂಜನೇಯ ಸ್ತೋತ್ರ ಪಠಿಸಿ.




ಕುಟುಂಬ ವಿಚಾರಗಳಿಗೆ ಹೆಚ್ಚು ಪ್ರಾಶಸ್ತ್ಯ ನೀಡಲಿದ್ದೀರಿ. ಕುಟುಂಬದೊಳಗೆ ನೀವು ತರಲು ಬಯಸುವ ಬದಲಾವಣೆಗಳು ಕಾಣಿಸುವುದಿಲ್ಲ. ನಿಮ್ಮ ಕ್ರಿಯಾತ್ಮಕ ಆಲೋಚನೆಯನ್ನು ಗರಿಷ್ಠ ಮಟ್ಟಕ್ಕೆ ಬಳಸುವ ಅವಕಾಶ ದೊರೆಯಲಿದೆ. ವೈಯಕ್ತಿಕ ಸಂಬಂಧದಲ್ಲಿ ಬಾಂಧವ್ಯ ಗಟ್ಟಿ ಆಗುವುದರಿಂದ ಹೆಚ್ಚು ಸಂತುಷ್ಟರಾಗಲಿದ್ದೀರಿ. ಆರೋಗ್ಯವು ಉತ್ತಮವಾಗಿ ಇರುತ್ತದೆ. ಶುಭದಿನ 26. ಶ್ರೀ ದಕ್ಷಿಣಾಮೂರ್ತಿ ಸ್ತೋತ್ರ ಪಠಿಸಿ.




ಆದಾಯ ಹೆಚ್ಚಳಕ್ಕೆ ಮಾಡುವ ಪ್ರಯತ್ನದಿಂದ ಏನೂ ಫಲ ದೊರೆಯುವುದಿಲ್ಲ. ನೀವು ಹಾಕಿದ ಶ್ರಮಕ್ಕೆ ಯಶಸ್ವಿ ಫಲಿತಾಂಶ ದೊರೆಯಲಿದೆ. ಓದಿನಲ್ಲಿ ನಿಮ್ಮ ಏಕಾಗ್ರತೆ ಹೆಚ್ಚಳವಾಗಲಿದೆ. ವೈಯಕ್ತಿಕ ಬಾಂಧವ್ಯ ಗಟ್ಟಿಯಾಗಲಿದೆ. ಹಳೇ ವ್ಯವಹಾರದ ವಿವಾದಗಳು ತಲೆ ಎತ್ತುವ ಸಾಧ್ಯತೆಗಳು ಇವೆ. ಪಿತ್ರಾರ್ಜಿತ ಆಸ್ತಿ ಹಂಚಿಕೆಯಲ್ಲಿ ಸಂಘರ್ಷ. ಶುಭದಿನ 24. ಗಣಪತಿ ಸುಬ್ರಹ್ಮಣ್ಯ ಜಪ ಮಾಡಿ.




ಆರೋಗ್ಯದ ಬಗ್ಗೆ ನಿಮ್ಮ ಗಮನ ಹೆಚ್ಚಾಗಲಿದೆ. ನೀವು ಹಾಕಿದ ಶ್ರಮಕ್ಕೆ ಅತ್ಯುತ್ತಮ ಫಲಿತಾಂಶ ದೊರೆಯಲು ಆರಂಭ ಆಗುತ್ತದೆ. ಉದ್ಯಮಿಗಳು ಸ್ಥಳೀಯ ಮಾರುಕಟ್ಟೆ ಸಮೀಕ್ಷೆ ಮಾಡಲಿದ್ದೀರಿ. ನಿಮ್ಮ ಆತ್ಮವಿಶ್ವಾಸ ಹೆಚ್ಚುತ್ತದೆ. ವಾರದ ಮಧ್ಯ ಭಾಗದಲ್ಲಿ ಹಣಕಾಸಿನ ಹರಿವು ಹೆಚ್ಚಳವಾಗಲಿದೆ. ಹಣ ಗಳಿಕೆಗೆ ಹೆಚ್ಚಿನ ಶ್ರಮ ಹಾಕಬೇಕಾಗುತ್ತದೆ. ಶುಭದಿನ 23. ಹನುಮಾನ್ ಚಾಲೀಸ್ ಓದಿರಿ.